# ವಾಣಿಜ್ಯ ಎಲ್ ಪಿಜಿ ಸಿಲಿಂಡರ್ ದರದಲ್ಲಿ ಭಾರೀ ಇಳಿಕೆ:ಇಂದಿನ ರೇಟ್ ಎಷ್ಟು..?

# ಗೃಹ ಬಳಕೆಯ 14.2 ಕೆ.ಜಿ. ಸಿಲಿಂಡರ್ ದರದಲ್ಲಿ ಯಾವುದೇ ಬದಲಾವಣೆ ಇಲ್ಲ

**ಬೆಂಗಳೂರು:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ಸಮಗ್ರ ಹಾಗೂ ಸ್ವತಂತ್ರ ತನಿಖೆ ನಡೆಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಬೇಕು ಎಂದು ಬಿಜೆಪಿ ವಿಧಾನ ಪರಿಷತ್ ಸದಸ್ಯ ಹಾಗೂ ಹಿರಿಯ ನಾಯಕ ಸಿ.ಟಿ. ರವಿ ಅವರು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಗೃಹಲಕ್ಷ್ಮಿ ಯೋಜನೆಯಡಿ ಸಾವಿರಾರು ಕೋಟಿ ರೂಪಾಯಿ ಹಣದ ವಹಿವಾಟಿನಲ್ಲಿ ಅಕ್ರಮ ನಡೆದಿರುವ ಆರೋಪಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.



ಬೆಂಗಳೂರಿನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಿ.ಟಿ. ರವಿ, ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನ ಪ್ರಕ್ರಿಯೆಯಲ್ಲಿ ಹಲವು ಗಂಭೀರ ಲೋಪಗಳು ಹಾಗೂ ಅಕ್ರಮಗಳ ಆರೋಪಗಳು ಕೇಳಿಬಂದಿದ್ದು, ಈ ಬಗ್ಗೆ ಸಮಗ್ರ ತನಿಖೆ ನಡೆಸದೆ ಸರ್ಕಾರ ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

**ಸಿಎಜಿ ವರದಿಯಲ್ಲಿ ಅಕ್ರಮಗಳ ಉಲ್ಲೇಖ?:** ಗೃಹಲಕ್ಷ್ಮಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ನೀಡಬೇಕಾದ ಹಣವನ್ನು ನಕಲಿ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆ ಮಾಡಿರುವುದು, ಮೃತಪಟ್ಟ ಫಲಾನುಭವಿಗಳ ಖಾತೆಗಳಿಗೆ ಸಹ ಹಣ ಜಮೆ ಮಾಡಿರುವುದು ಸೇರಿದಂತೆ ಹಲವು ಗಂಭೀರ ಅಂಶಗಳು ಬೆಳಕಿಗೆ ಬಂದಿವೆ ಎಂದು ಅವರು ಹೇಳಿದರು. ಈ ವಿಚಾರವನ್ನು ಭಾರತದ ಲೆಕ್ಕಪರಿಶೋಧಕ ಮತ್ತು ಮಹಾಲೆಕ್ಕಪಾಲಕರ (ಸಿಎಜಿ) ವರದಿಯಲ್ಲೂ ಉಲ್ಲೇಖಿಸಲಾಗಿದೆ ಎಂದು ಆರೋಪಿಸಿದ ಅವರು, ಈ ಪ್ರಕರಣವನ್ನು ಸಾಮಾನ್ಯ ಆಡಳಿತಾತ್ಮಕ ಲೋಪ ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದರು.

"ರಾಜ್ಯ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯಲ್ಲಿ ಸಾವಿರಾರು ಕೋಟಿ ರೂಪಾಯಿ ಸಾರ್ವಜನಿಕ ಹಣದ ವಹಿವಾಟು ನಡೆದಿದೆ. ಈ ಯೋಜನೆಯ ಅನುಷ್ಠಾನದಲ್ಲಿ ಪಾರದರ್ಶಕತೆ ಇಲ್ಲದಿರುವುದು ಗಂಭೀರ ವಿಚಾರವಾಗಿದೆ. ಸಿಎಜಿ ವರದಿಯಲ್ಲಿ ಉಲ್ಲೇಖಗೊಂಡಿರುವ ಅಂಶಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು" ಎಂದು ಅವರು ಹೇಳಿದರು.

**5 ಸಾವಿರ ಕೋಟಿ ರೂ. ಹಣ ಎಲ್ಲಿಗೆ ಹೋಯಿತು?:** ಗೃಹಲಕ್ಷ್ಮಿ ಯೋಜನೆಯಡಿ ಸುಮಾರು 5,000 ಕೋಟಿ ರೂಪಾಯಿ ಮೊತ್ತ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮೆಯಾಗಿಲ್ಲ ಎಂಬ ಆರೋಪವನ್ನು ಮುಂದಿಟ್ಟ ಸಿ.ಟಿ. ರವಿ, ಈ ಹಣದ ಬಗ್ಗೆ ಸರ್ಕಾರ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು. ಈ ಮೊತ್ತ ದುರುಪಯೋಗವಾಗಿರುವ ಅಥವಾ ಅಕ್ರಮವಾಗಿ ವರ್ಗಾವಣೆಯಾಗಿರುವ ಸಾಧ್ಯತೆಯನ್ನು ತಳ್ಳಿಹಾಕಲು ಸಾಧ್ಯವಿಲ್ಲ ಎಂದು ಅವರು ಅನುಮಾನ ವ್ಯಕ್ತಪಡಿಸಿದರು.

"ಫಲಾನುಭವಿಗಳ ಖಾತೆಗೆ ತಲುಪಬೇಕಿದ್ದ ಸಾವಿರಾರು ಕೋಟಿ ರೂಪಾಯಿ ಹಣ ಎಲ್ಲಿಗೆ ಹೋಗಿದೆ? ಈ ಹಣ ಯಾರ ಖಾತೆಗೆ ವರ್ಗಾವಣೆಯಾಗಿದೆ? ಈ ಕುರಿತು ಸರ್ಕಾರ ಇದುವರೆಗೆ ಸಾರ್ವಜನಿಕರಿಗೆ ಯಾವುದೇ ಸ್ಪಷ್ಟ ಮಾಹಿತಿ ನೀಡಿಲ್ಲ. ಇದೊಂದು ಗಂಭೀರ ಹಣ-ಕಾಸು ಅಕ್ರಮದ ಪ್ರಕರಣವಾಗಿರಬಹುದು" ಎಂದು ಅವರು ಹೇಳಿದರು.

**ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ:** ಈ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಸಿ.ಟಿ. ರವಿ, "ಫಲಾನುಭವಿಗಳ ಖಾತೆಗೆ ಜಮೆಯಾಗಬೇಕಿದ್ದ ಹಣವನ್ನು ಲೂಟಿ ಮಾಡಲು ಕಾಂಗ್ರೆಸ್ ಸರ್ಕಾರ ಬೆಂಬಲ ನೀಡುತ್ತಿದೆಯೇ?" ಎಂದು ಪ್ರಶ್ನಿಸಿದರು. ಇಷ್ಟೊಂದು ದೊಡ್ಡ ಮಟ್ಟದ ಆರೋಪಗಳು ಕೇಳಿಬಂದಿದ್ದರೂ ಇದುವರೆಗೆ ಯಾವುದೇ ಎಫ್‌ಐಆರ್ ದಾಖಲಿಸದಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದು ಅವರು ಹೇಳಿದರು.

"ಸಾಮಾನ್ಯ ನಾಗರಿಕರ ಹಣದ ವಿಚಾರದಲ್ಲಿ ಸರ್ಕಾರ ಇಷ್ಟು ನಿರ್ಲಕ್ಷ್ಯ ತೋ-ರಿಸುತ್ತಿದೆಯೇಕೆ? ಸಾವಿರಾರು ಕೋಟಿ ರೂಪಾಯಿ ಹಣದ ಅಕ್ರಮ ಆರೋಪದ ಕುರಿತು ಸರ್ಕಾರ ಯಾಕೆ ಮೌನ ವಹಿಸಿದೆ? ಈ ಪ್ರಕರಣದಲ್ಲಿ ಇದುವರೆಗೆ ಒಬ್ಬರ ವಿರುದ್ಧವೂ ಪ್ರಕರಣ ದಾಖಲಾಗಿಲ್ಲ ಎಂಬುದು ಆಶ್ಚರ್ಯಕರ ಸಂಗತಿ" ಎಂದು ಅವರು ಟೀಕಿಸಿದರು.

**ವಿಧಾನಸಭೆಯಲ್ಲೂ ಚರ್ಚೆಗೆ ಗ್ರಾಸವಾಗಿದ್ದ ವಿಚಾರ:** ಗೃಹಲಕ್ಷ್ಮಿ ಯೋಜನೆಯಡಿ ಹಲವು ಫಲಾನುಭವಿಗಳ ಖಾತೆಗಳಿಗೆ ಎರಡು ತಿಂಗಳ ಕಾಲ ಹಣ ಜಮೆಯಾಗದಿರುವ ವಿಚಾರ ಈಗಾಗಲೇ ರಾಜ್ಯ ವಿಧಾನಸಭೆಯಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿತ್ತು ಎಂದು ಸಿ.ಟಿ. ರವಿ ನೆನಪಿಸಿದರು. ಪ್ರತಿಪಕ್ಷಗಳು ಈ ಕುರಿತು ಹಲವು ಬಾರಿ ಪ್ರಶ್ನೆ ಎತ್ತಿದ್ದರೂ, ಸರ್ಕಾರ ಸಮರ್ಪಕ ಉತ್ತರ ನೀಡುವಲ್ಲಿ ವಿಫಲವಾಗಿದೆ ಎಂದು ಅವರು ಆರೋಪಿಸಿದರು.

"ಸಾವಿರಾರು ಮಹಿಳೆಯರು ತಮ್ಮ ಖಾತೆಗಳಿಗೆ ಹಣ ಜಮೆಯಾಗಿಲ್ಲ ಎಂದು ದೂರು ನೀಡಿದ್ದರು. ಈ ವಿಚಾರ ವಿಧಾನಸಭೆಯಲ್ಲಿ ಕೂಡ ಪ್ರಸ್ತಾಪವಾಗಿತ್ತು. ಆದರೆ ಸರ್ಕಾರ ಸಮಸ್ಯೆಯನ್ನು ಪರಿಹರಿಸುವ ಬದಲು ಅದನ್ನು ನಿರ್ಲಕ್ಷ್ಯ ಮಾಡಿದೆ" ಎಂದು ಅವರು ಹೇಳಿದರು.

**ಎಸ್‌ಐಟಿ ತನಿಖೆಗೆ ಒತ್ತಾಯ:** ಈ ಹಿನ್ನೆಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನದಲ್ಲಿ ನಡೆದಿರುವ ಎಲ್ಲಾ ಹಣಕಾಸು ವ್ಯವಹಾರಗಳ ಕುರಿತು ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಅಥವಾ ಸ್ವತಂತ್ರ ಸಂಸ್ಥೆಗಳ ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಸಿ.ಟಿ. ರವಿ ಆಗ್ರಹಿಸಿದರು.

"ಸಾರ್ವಜನಿಕರ ಹಣದ ದುರುಪಯೋಗ ನಡೆದಿದೆಯೇ ಎಂಬುದನ್ನು ಪತ್ತೆಹಚ್ಚಲು ಎಸ್‌ಐಟಿ ತನಿಖೆ ನಡೆಸಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು" ಎಂದು ಅವರು ಒತ್ತಾಯಿಸಿದರು.

**ಗ್ಯಾರಂಟಿ ಯೋಜನೆಗಳಿಗೆ ಷರತ್ತು ವಿಧಿಸುವುದಕ್ಕೂ ವಿರೋಧ:** ಇದೇ ವೇಳೆ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ವಿವಿಧ ಷರತ್ತುಗಳನ್ನು ವಿಧಿಸಲಾಗುತ್ತಿರುವ ಕ್ರಮವನ್ನೂ ಸಿ.ಟಿ. ರವಿ ಖಂಡಿಸಿದರು. ಚುನಾವಣೆ ವೇಳೆ ಜನರಿಗೆ ನೀಡಿದ ಭರವಸೆಗಳನ್ನು ಯಾವುದೇ ಹೆಚ್ಚುವರಿ ಷರತ್ತುಗಳು ಅಥವಾ ನಿರ್ಬಂಧಗಳಿಲ್ಲದೆ ಜಾ-ರಿಗೊಳಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ ಎಂದು ಅವರು ಹೇಳಿದರು.

"ಜನರಿಗೆ ಒಂದು ರೀತಿಯ ಭರವಸೆ ನೀಡಿ ಅಧಿಕಾರಕ್ಕೆ ಬಂದ ನಂತರ, ಆ ಯೋಜನೆಗಳಿಗೆ ಹೊಸ ಷರತ್ತುಗಳನ್ನು ವಿಧಿಸುವುದು ಸರಿಯಲ್ಲ. ಸರ್ಕಾರ ತನ್ನ ಚುನಾವಣಾ ಭರವಸೆಗಳನ್ನು ಸಂಪೂರ್ಣವಾಗಿ ಈಡೇರಿಸಬೇಕು" ಎಂದು ಅವರು ಆಗ್ರಹಿಸಿದರು.

ಪ್ರಸ್ತುತ ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದ ಅಕ್ರಮ ಆರೋಪಗಳು ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದ್ದು, ಈ ಕುರಿತು ರಾಜ್ಯ ಸರ್ಕಾರ ಯಾವ ರೀತಿಯ ಪ್ರತಿಕ್ರಿಯೆ ನೀಡುತ್ತದೆ ಎಂಬುದನ್ನು ಕಾದು ನೋಡಬೇಕಿದೆ.

## ಕೊನೆಗೂ ಸೆನ್ಸಾರ್ ಗುದ್ದಾಟದಲ್ಲಿ ಗೆದ್ದ 'ಜನನಾಯಗನ್'

ರಾಜಕೀಯ ಜಿದ್ದು, ಕುರ್ಚಿ ಕಾದಾಟದ ನಡುವೆ ಸೆನ್ಸಾರ್ ಆಗದೇ ಉಳಿದಿದ್ದ ದಳಪತಿ ವಿಜಯ್ ಅಭಿನಯದ ಕೊನೆಯ ಚಿತ್ರ 'ಜನನಾಯಗನ್' ಕೊನೆಗೂ ಸೆನ್ಸಾರ್ ಆಗಿದೆ. ಚಿತ್ರಕ್ಕೆ ಸೆನ್ಸಾರ್ ಮಂಡಳಿ ಎ ಸರ್ಟಿಫಿಕೇಟ್ ನೀಡಿದೆ. ಈ ಮೂಲಕ 'ಜನನಾಯಗನ್' ರಿಲೀಸ್‌ಗೆ ಸಿಬಿಎಫ್‌ಸಿ ಹಸಿರು ನಿಶಾನೆ ತೋರಿಸಿದೆ.

ಕಳೆದ ತಮಿಳುನಾಡು ವಿಧಾಸಭೆ ಚುನಾವಣೆಗೂ ಮುನ್ನ ಚಿತ್ರ ತೆರೆ ಕಾಣಲು ಸಿದ್ಧತೆ ನಡೆಸಿ ಸೆನ್ಸಾರ್ ಮಂಡಳಿಯ ಕದ ತಟ್ಟಿತ್ತು. ಆದರೆ ಚಿತ್ರದ ಬಿಡುಗಡೆ ತಡೆಯಲು ಹಿಂದಿನ ಸಿಎಂ ಸ್ಟಾಲಿನ್ ಸರ್ಕಾರದ ಹಸ್ತಕ್ಷೇಪ ಇತ್ತು ಅನ್ನೋದು ಚರ್ಚೆಯಾಗಿದ್ದ ವಿಚಾರ. ಕಳೆದ ಜನವರಿಯಂದೇ ರಿಲೀಸ್ ಆಗಬೇಕಿದ್ದ 'ಜನನಾಯಗನ್' ಇದೀಗ ಸೆನ್ಸಾರ್ ಆಗಿದೆ. ಇದೇ ತಿಂಗಳು ಚಿತ್ರ ಬಿಡುಗಡೆ ಆಗುವ ಸಾಧ್ಯತೆ ಇದೆ. ಕೆಲವೇ ದಿನಗಳಲ್ಲಿ ಅಧಿಕೃತ ಘೋಷಣೆಯಾಗುವ ಸಾಧ್ಯತೆಯಿದೆ.

ಮಾಜಿ ನಟ ವಿಜಯ್ ಈಗ ತಮಿಳುನಾಡಿನ ಹಾಲಿ ಸಿಎಂ. ಚುನಾವಣೆಗೂ ಪೂರ್ವದಲ್ಲಿ ಜನನಾಯಗನ್ ಮತದಾರರ ಮೇಲೆ ಪ್ರಭಾವ ಬೀಳಬಹುದು ಅನ್ನೋ ಕಾರಣಕ್ಕೆ ಆಗಿನ ಸರ್ಕಾರ ಚಿತ್ರಕ್ಕೆ ಸೆನ್ಸಾರ್ ತಡೆದಿತ್ತು. ಇದೀಗ ವಿಜಯ್ ಸಿಎಂ ಆದ್ಮೇಲೆ ರಿಲೀಸ್ ಆಗ್ತಿರೋ 'ಜನನಾಯಗನ್' ನಿಜಕ್ಕೂ ವಿಶೇಷವೇ ಸರಿ. ಇದರಿಂದ ವಿಜಯ್ ಫ್ಯಾನ್ಸ್ ಖುಷಿಯಾಗಿದ್ದು ಬಿಡುಗಡೆಯನ್ನೇ ಎದುರು ನೋಡುತ್ತಿದ್ದಾರೆ.

'ಜನನಾಯಗನ್' ದಳಪತಿ ವಿಜಯ್ ಅವರ ಸಿನಿಜೀವನದ ಕೊನೆಯ ಚಿತ್ರವಾಗಿರುವ ಕಾರಣದಿಂದ ಅಭಿಮಾನಿಗಳಲ್ಲಿ ಚಿತ್ರದ ಬಗ್ಗೆ ಭಾರೀ ನಿರೀಕ್ಷೆ ಮೂಡಿದೆ. ರಾಜಕೀಯ ಪ್ರವೇಶದ ಬಳಿಕ ವಿಜಯ್ ಪೂರ್ಣ ಪ್ರಮಾಣದಲ್ಲಿ ಸಾರ್ವಜನಿಕ ಜೀವನ ಮತ್ತು ಆಡಳಿತದತ್ತ ಗಮನ ಹರಿಸಿರುವ ಹಿನ್ನೆಲೆಯಲ್ಲಿ, ಈ ಚಿತ್ರವು ಅವರ ಸಿನಿ ಪಯಣಕ್ಕೆ ಸ್ಮರಣೀಯ ವಿದಾಯವಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ. ಚಿತ್ರದ ಟ್ರೇಲರ್, ಹಾಡುಗಳು ಹಾಗೂ ಪ್ರಚಾರ ಸಾಮಗ್ರಿಗಳು ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿವೆ.

ಇದೇ ವೇಳೆ, 'ಜನನಾಯಗನ್' ಚಿತ್ರ ಬಿಡುಗಡೆಯು ತಮಿಳುನಾಡಿನ ರಾಜಕೀಯ ಮತ್ತು ಸಿನಿಮಾ ವಲಯದಲ್ಲೂ ಕುತೂಹಲ ಕೆರಳಿಸಿದೆ. ಒಂದು ಕಡೆ ಹಾಲಿ ಮುಖ್ಯಮಂತ್ರಿ ಸ್ಥಾನದಲ್ಲಿರುವ ವಿಜಯ್ ಅವರ ಕೊನೆಯ ಸಿನಿಮಾ ಬಿಡುಗಡೆಯಾಗುತ್ತಿರುವುದು ವಿಶೇಷವಾಗಿದ್ದರೆ, ಮತ್ತೊಂದೆಡೆ ಚಿತ್ರ ಬಿಡುಗಡೆಯ ನಂತರ ರಾಜ್ಯದಾದ್ಯಂತ ಅಭಿಮಾನಿಗಳು ಭರ್ಜರಿ ಸ್ವಾಗತಕ್ಕೆ ಸಿದ್ಧತೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ಚಿತ್ರ ಬಿಡುಗಡೆಯ ದಿನಾಂಕದ ಅಧಿಕೃತ ಘೋಷಣೆಗಾಗಿ ಸಿನಿಪ್ರೇಮಿಗಳು ಮತ್ತು ವಿಜಯ್ ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ.



## ಜುಲೈ 05 ಕ್ಕೆ ಡಾ. ಬಿ ಆರ್ ಅಂಬೇಡ್ಕರ್ ಪ್ರತಿಮೆ ಅನಾವರಣ: ಸಚಿವ ಕೆ.ಹೆಚ್ ಮುನಿಯಪ್ಪ



**ದೇವನಹಳ್ಳಿ:** ತಾಲೂಕಿನ ಬೀರಸಂದ್ರ ಬಳಿಯ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಡಳಿತ ಭವನದ ಆವರಣದಲ್ಲಿ ಸಂವಿಧಾನಶಿಲ್ಪಿ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಯು ಜುಲೈ 05 ಕ್ಕೆ ಲೋಕಾರ್ಪಣೆಗೊಳ್ಳಲಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರಾದ ಕೆ.ಹೆಚ್ ಮುನಿಯಪ್ಪ ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಅಂಬೇಡ್ಕರ್ ಪ್ರತಿಮೆಯು 14 ಅಡಿ ಎತ್ತರ ಇದ್ದು ಅಂದಾಜು 1.35 ಕೋಟಿ ರೂ.ಗಳಲ್ಲಿ ನಿರ್ಮಿಸಲಾಗಿದೆ. ಪ್ರತಿಮೆ ಅನಾವರಣ ಜಿಲ್ಲೆಯ ಜನತೆಯ ಬಹುದಿನಗಳ ಬೇಡಿಕೆ, ಅದನ್ನು ಸಾಕಾರಗೊಳಿಸುವ ಕಾಲ ಕೂಡಿಬಂದಿದ್ದು ಜುಲೈ 05 ಭಾನುವಾರ ರಂದು ಉದ್ಘಾಟನೆ ಆಗಲಿದೆ ಎಂದರು.

ಜುಲೈ 05 ರ ಬೆಳಗ್ಗೆ 11 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದ್ದು ರಾಜ್ಯ ಸಭೆ ವಿರೋಧ ಪಕ್ಷದ ನಾಯಕರು ಹಾಗೂ ಅಖಿಲ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ರವರು ಅಂಬೇಡ್ಕರ್ ಪ್ರತಿಮೆ ಅನಾವರಣ ಮಾಡಲಿದ್ದಾರೆ.

ವೇದಿಕೆ ಕಾರ್ಯಕ್ರಮವು ದೇವನಹಳ್ಳಿ ತಾಲ್ಲೂಕಿನ ಕುಂದಾಣ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಲೂರುದುದ್ದನಹಳ್ಳಿ ಬಳಿಯ ಶಿಕ್ಷಕರ ಬಡಾವಣೆಯಲ್ಲಿ ಜರುಗಲಿದ್ದು ಸಮಾರಂಭದ ಉದ್ಘಾಟನೆಯನ್ನು ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ರವರ ಅಮೃತ ಹಸ್ತದಿಂದ ನೆರವೇರಿಸಲಿದ್ದಾರೆ. ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಸೇರಿದಂತೆ ರಾಜ್ಯದ ಸಂಸದರು, ಸಚಿವರು, ಜಿಲ್ಲೆಯ ಎಲ್ಲಾ ಶಾಸಕರುಗಳು, ಚುನಾಯಿತ ಜನಪ್ರತಿನಿದಿಗಳು, ಎಲ್ಲಾ ನಾಮನಿರ್ದೇಶಿತ ಸದಸ್ಯರುಗಳು, ಎಲ್ಲಾ ನಿಗಮ/ಮಂಡಳಿಗಳ ಅಧ್ಯಕ್ಷರು ಮತ್ತು ಸದಸ್ಯರುಗಳು, ಎಲ್ಲಾ ಸಂಘ-ಸಂಸ್ಥೆಗಳ ಮುಖಂಡರು ಹಾಗೂ ಸಾರ್ವಜನಿಕರು ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ ಎಂದರು.

ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿಯಿಂದ ಪಲ್ಲಕ್ಕಿ ಜಿಲ್ಲೆಯ ನಾಲ್ಕು ತಾಲೂಕುಗಳನ್ನು ಒಳಗೊಂಡ 102 ಗ್ರಾಮ ಪಂಚಾಯಿತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರ ಇರುವ ಪಲ್ಲಕ್ಕಿಯೊಂದಿಗೆ ವಿವಿಧ ಸಾಂಸ್ಕೃತಿಕ ಕಲಾ ತಂಡಗಳು ಭಾಗವಹಿಸಲಿದ್ದು ಸಮಾರಂಭವನ್ನು ಹಬ್ಬದ ರೀತಿಯಲ್ಲಿ ಆಚ-ರಿಸಲಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಕನ್ನಡಪರ, ದಲಿತಪರ, ಪ್ರಗತಿ ಪರ ಸಂಘಟನೆಗಳ ಮುಖಂಡರು, ವಿವಿಧ ಪಕ್ಷಗಳ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸಚಿವರು ಮನವಿ ಮಾಡಿದರು.

ನಂತರ ಅಧಿಕಾರಿಗಳೊಂದಿಗೆ ಸಚಿವರು ಪೂರ್ವಭಾವಿ ಸಭೆ ನಡೆಸಿ ಕಾರ್ಯಕ್ರಮಕ್ಕೆ ವೇದಿಕೆ ಸಿದ್ಧತೆ, ಆಹ್ವಾನ ಪತ್ರಿಕೆ ಮುದ್ರಣ, ಗಣ್ಯರಿಗೆ ಆಹ್ವಾನ, ಜನರ ಕರೆತರುವಿಕೆ, ವಾಹನಗಳ ಪಾರ್ಕಿಂಗ್, ಭದ್ರತೆ, ಕುಡಿಯುವ ನೀರು-ಉಪಹಾರ ಹಾಗೂ ಇನ್ನಿತರ ಸಿದ್ಧತೆ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿ ಮೇಲುಸ್ತುವಾರಿ ವಹಿಸಲು ಡಿಸಿ,ಸಿಇಒಗೆ ಸೂಚಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಡಾ ಕೆ.ಎನ್ ಅನುರಾಧ, ಸಿಇಒ ಡಾ ವಾಸಂತಿ ಅಮರ್, ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ರಾಜಣ್ಣ, ಬಯಪ ಅಧ್ಯಕ್ಷರಾದ ಶಾಂತ್ ಕುಮಾರ್ , ನಿರ್ದೇಶಕರಾದ ಪ್ರಸನ್ನಕುಮಾರ್,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಸಿ.ಮಂಜುನಾಥ್ ಸೇರಿದಂತೆ, ಸ್ಥಳೀಯ ಜನಪ್ರತಿನಿಧಿಗಳು ಅಧಿಕಾರಿಗಳು ಉಪಸ್ಥಿತರಿದ್ದರು.

# ಗಣಿ ಹರಾಜು ಪಡೆದೂ ಗಣಿಗಾರಿಕೆ ಆರಂಭಿಸದವರ ಪಟ್ಟಿ ನೀಡಿ; ಅಧಿಕಾರಿಗಳಿಗೆ ಸಿಎಂ ಸೂಚನೆ



ಬೆಂಗಳೂರು: ರಾಜ್ಯದಲ್ಲಿ ಗಣಿ ಪ್ರದೇಶಗಳನ್ನು ಹರಾಜು ಮೂಲಕ ಪಡೆದುಕೊಂಡ ಬಳಿಕ ವರ್ಷಗಳ ಕಾಲ ಗಣಿಗಾರಿಕೆ ಆರಂಭಿಸದೇ ಭೂಮಿಯನ್ನು ಹಾಗೆಯೇ ಉಳಿಸುವ ಪ್ರವೃತ್ತಿಗೆ ಕಡಿವಾಣ ಹಾಕುವ ಉದ್ದೇಶದಿಂದ, ಗಣಿ ಹರಾಜು ಪಡೆದ ಕಂಪನಿಗಳು ಮತ್ತು ವ್ಯಕ್ತಿಗಳು ನಿಗದಿತ ಕನಿಷ್ಠ ಅವಧಿಯೊಳಗೆ ಗಣಿಗಾರಿಕೆ ಆರಂಭಿಸುವಂತೆ ಸ್ಪಷ್ಟ ನಿಯಮಾವಳಿ ರೂಪಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಬುಧವಾರ ವಿಧಾನಸೌಧದಲ್ಲಿ ನಡೆದ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯದಲ್ಲಿ ಗಣಿ ಹರಾಜು, ಗಣಿಗಾ-ರಿಕೆ ಚಟುವಟಿಕೆಗಳು, ಆದಾಯ ಸಂಗ್ರಹಣೆ ಹಾಗೂ ಅಕ್ರಮ ಗಣಿಗಾರಿಕೆ ನಿಯಂತ್ರಣದ ಕುರಿತು ಸಮಗ್ರವಾಗಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ರಾಜ್ಯದಲ್ಲಿ ಜಾರಿಯಲ್ಲಿರುವ ಗಣಿ ನೀತಿಗಳ ಪರಿಣಾಮಕಾ-ರಿತ್ವದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಗಣಿಗಾರಿಕೆ ಕ್ಷೇತ್ರದಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ಹೆಚ್ಚಿಸಲು ಹೊಸ ನಿಯಮಗಳನ್ನು ರೂಪಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

**ಗಣಿ ಹರಾಜು ಪಡೆದು ವರ್ಷಗಳಾದರೂ ಗಣಿಗಾರಿಕೆ ಆರಂಭಿಸದವರ ವಿರುದ್ಧ ಕ್ರಮ ಏನು?:** ಸಭೆಯಲ್ಲಿ ಅಧಿಕಾರಿಗಳನ್ನು ಪ್ರಶ್ನಿಸಿದ ಮುಖ್ಯಮಂತ್ರಿ, "ರಾಜ್ಯದಲ್ಲಿ ಹರಾಜು ಮೂಲಕ ಗಣಿ ಪ್ರದೇಶಗಳನ್ನು ಪಡೆದುಕೊಂಡು ಹಲವು ವರ್ಷಗಳಾದರೂ ಇನ್ನೂ ಗಣಿಗಾರಿಕೆ ಆರಂಭಿಸದವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ?" ಎಂದು ಪ್ರಶ್ನಿಸಿದರು. ಗಣಿ ಹರಾಜು ಪಡೆಯುವ ಕಂಪನಿಗಳು ಅಥವಾ ವ್ಯಕ್ತಿಗಳು ಗಣಿಗಾರಿಕೆ ನಡೆಸುವ ಉದ್ದೇಶದಿಂದಲೇ ಭೂಮಿ ಪಡೆಯುತ್ತಾರೆಯೇ ಅಥವಾ ಬೇರೆ ಉದ್ದೇಶಗಳಿಗಾಗಿ ಭೂಮಿಯನ್ನು ಕಾಯ್ದಿರಿಸಿಕೊಳ್ಳುತ್ತಾರೆಯೇ ಎಂಬುದರ ಬಗ್ಗೆ ಸಮಗ್ರ ಮಾಹಿತಿ ಸಂಗ್ರಹಿಸಬೇಕು ಎಂದು ಅವರು ಸೂಚಿಸಿದರು.

ರಾಜ್ಯದಲ್ಲಿ ಇದುವರೆಗೆ ಎಷ್ಟು ಗಣಿ ಪ್ರದೇಶಗಳನ್ನು ಹರಾಜು ಮೂಲಕ ನೀಡಲಾಗಿದೆ, ಅವುಗಳಲ್ಲಿ ಎಷ್ಟು ಪ್ರದೇಶಗಳಲ್ಲಿ ಗಣಿಗಾರಿಕೆ ಆರಂಭವಾಗಿದೆ, ಎಷ್ಟು ಪ್ರಕರಣಗಳಲ್ಲಿ ಇನ್ನೂ ಕಾರ್ಯಾರಂಭವಾಗಿಲ್ಲ, ಹಾಗೂ ವಿಳಂಬಕ್ಕೆ ಕಾರಣಗಳೇನು ಎಂಬ ಬಗ್ಗೆ ವಿವರವಾದ ವರದಿ ಸಿದ್ಧಪಡಿಸುವಂತೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಇತರ ರಾಜ್ಯಗಳ ಗಣಿ ನೀತಿಯ ಅಧ್ಯಯನಕ್ಕೆ ಸೂಚನೆ:** ರಾಜ್ಯದ ಪ್ರಸ್ತುತ ಗಣಿ ನೀತಿಯನ್ನು ಮರುಪರಿಶೀಲಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟ ಸಿಎಂ, ದೇಶದ ಇತರ ರಾಜ್ಯಗಳಲ್ಲಿ ಜಾರಿಯಲ್ಲಿರುವ ಗಣಿ ನೀತಿಗಳು, ಕಾನೂನುಗಳು ಹಾಗೂ ಆಡಳಿತಾತ್ಮಕ ಕ್ರಮಗಳ ಸಮಗ್ರ ಅಧ್ಯಯನ ನಡೆಸಬೇಕು ಎಂದು ಹೇಳಿದರು.

"ಇತರ ರಾಜ್ಯಗಳಲ್ಲಿ ಗಣಿ ಹರಾಜು ಪಡೆದವರು ಎಷ್ಟು ಅವಧಿಯೊಳಗೆ ಕಾರ್ಯಾರಂಭ ಮಾಡಬೇಕು ಎಂಬ ಬಗ್ಗೆ ಯಾವ ರೀತಿಯ ನಿಯಮಗಳಿವೆ ಎಂಬುದನ್ನು ಅಧ್ಯಯನ ಮಾಡಿ, ಕರ್ನಾಟಕದಲ್ಲೂ ಪರಿಣಾಮಕಾರಿ ಹಾಗೂ ಕಟ್ಟುನಿಟ್ಟಿನ ನಿಯಮಗಳನ್ನು ರೂಪಿಸಬೇಕು" ಎಂದು ಅವರು ಸೂಚಿಸಿದರು.

ಗಣಿಗಾರಿಕೆ ಆರಂಭಕ್ಕೆ ವಿಳಂಬವಾಗುತ್ತಿರುವ ಪ್ರಕರಣಗಳಲ್ಲಿ ಪರಿಸರ ಅನುಮತಿ, ಅರಣ್ಯ ಇಲಾಖೆಯ ಅನುಮತಿ, ಕೇಂದ್ರ ಸರ್ಕಾರದ ಅನುಮೋದನೆ ಅಥವಾ ಇತರ ಆಡಳಿತಾತ್ಮಕ ಅಡಚಣೆಗಳ ಬಗ್ಗೆ ಸಮಗ್ರ ವಿಶ್ಲೇಷಣೆ ನಡೆಸುವಂತೆಯೂ ಅವರು ಅಧಿಕಾರಿಗಳಿಗೆ ಸೂಚಿಸಿದರು.

**ಅರಣ್ಯ ಇಲಾಖೆ ಅನುಮತಿ ಬಾಕಿ ಪ್ರಕರಣಗಳ ವರದಿ ಕೋರಿಕೆ:** ಗಣಿಗಾರಿಕೆ ಯೋಜನೆಗಳು ವಿವಿಧ ಇಲಾಖೆಗಳ ಅನುಮತಿಗಳ ಕೊರತೆಯಿಂದ ಸ್ಥಗಿತಗೊಂಡಿರುವ ಬಗ್ಗೆ ಮಾಹಿತಿ ಪಡೆದ ಮುಖ್ಯಮಂತ್ರಿ, ಅರಣ್ಯ ಇಲಾಖೆಯಿಂದ ಅನುಮತಿ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆಯನ್ನು ಪ್ರತ್ಯೇಕವಾಗಿ ಗುರುತಿಸಿ ವರದಿ ಸಲ್ಲಿಸುವಂತೆ ಸೂಚಿಸಿದರು.

"ಎಷ್ಟು ಗಣಿಗಾರಿಕೆ ಯೋಜನೆಗಳು ಅರಣ್ಯ ಇಲಾಖೆ ಅನುಮತಿಯ ಕೊರತೆಯಿಂದ ಸ್ಥಗಿತಗೊಂಡಿವೆ? ಎಷ್ಟು ಪ್ರಕರಣಗಳಲ್ಲಿ ಕಡತಗಳು ಬಾಕಿ ಇವೆ? ವಿಳಂಬಕ್ಕೆ ನಿಖರ ಕಾರಣಗಳೇನು?" ಎಂಬ ಪ್ರಶ್ನೆಗಳನ್ನು ಸಿಎಂ ಸಭೆಯಲ್ಲಿ ಮುಂದಿಟ್ಟರು. ಈ ಕುರಿತು ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ಶೀಘ್ರ ಪರಿಹಾರ ಕಂಡುಕೊಳ್ಳುವಂತೆ ಅವರು ತಿಳಿಸಿದರು.

**ಇಲಾಖೆಯ ಆದಾಯ ಸಾಧನೆಗೆ ಮೆಚ್ಚುಗೆ:** ಸಭೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಆದಾಯ ಸಂಗ್ರಹದ ಪ್ರಗತಿಯನ್ನೂ ಪರಿಶೀಲಿಸಲಾಯಿತು. ಅಧಿಕಾರಿಗಳ ಮಾಹಿತಿ ಪ್ರಕಾರ, 2025-26ನೇ ಹಣಕಾಸು ವರ್ಷದಲ್ಲಿ ಇಲಾಖೆಗೆ ನಿಗದಿಪಡಿಸಲಾಗಿದ್ದ ಆದಾಯ ಗು-ರಿಯ ಶೇಕಡಾ 98ರಷ್ಟು ಸಾಧನೆ ಮಾಡಲಾಗಿದೆ.

ಈ ಅವಧಿಯಲ್ಲಿ ಒಟ್ಟು ರೂ.8,845.39 ಕೋಟಿ ಆದಾಯ ಸಂಗ್ರಹವಾಗಿದ್ದು, ಇದು ಇಲಾಖೆಯ ಪ್ರಮುಖ ಸಾಧನೆಗಳಲ್ಲಿ ಒಂದಾಗಿದೆ ಎಂದು ಅಧಿಕಾರಿಗಳು ವಿವರಿಸಿದರು. ಇದೇ ವೇಳೆ, 2026-27ನೇ ಹಣಕಾಸು ವರ್ಷದಲ್ಲಿ ಇದುವರೆಗೆ ರೂ.1,164.11 ಕೋಟಿ ಆದಾಯ ಸಂಗ್ರಹಿಸಲಾಗಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಲಾಯಿತು.

ಆದಾಯ ಸಂಗ್ರಹದಲ್ಲಿ ಉತ್ತಮ ಸಾಧನೆ ಮಾಡಿರುವ ಅಧಿಕಾರಿಗಳಿಗೆ ಮುಖ್ಯಮಂತ್ರಿ ಅಭಿನಂದನೆ ಸಲ್ಲಿಸಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಪಾರದರ್ಶಕತೆ ಹಾಗೂ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಸೂಚನೆ ನೀಡಿದರು.

**ಅಕ್ರಮ ಗಣಿಗಾರಿಕೆ ವಿರುದ್ಧ ಕಠಿಣ ಕ್ರಮ:** ರಾಜ್ಯದಲ್ಲಿ ಅಕ್ರಮ ಹಾಗೂ ಅನಧಿಕೃತ ಗಣಿಗಾರಿಕೆಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮಗಳ ಬಗ್ಗೆ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಯಿತು. ಅಧಿಕಾರಿಗಳ ಪ್ರಕಾರ, 2025-26ನೇ ಸಾಲಿನಲ್ಲಿ ಅಕ್ರಮ ಗಣಿಗಾರಿಕೆ ಹಾಗೂ ಅನಧಿಕೃತ ಕಲ್ಲು ಮತ್ತು ಖನಿಜ ಸಾಗಣೆಗೆ ಸಂಬಂಧಿಸಿದ ಒಟ್ಟು 6,301 ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ.

ಈ ಪ್ರಕರಣಗಳಲ್ಲಿ ಭಾಗಿಯಾಗಿದ್ದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದ್ದು, ಒಟ್ಟು ರೂ.31.26 ಕೋಟಿ ದಂಡವನ್ನು ವಸೂಲಿ ಮಾಡಲಾಗಿದೆ. ಅಲ್ಲದೆ, ಗಂಭೀರ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು 268 ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಅಕ್ರಮ ಗಣಿಗಾರಿಕೆ ಚಟುವಟಿಕೆಗಳ ವಿರುದ್ಧ ಇನ್ನಷ್ಟು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸೂಚಿಸಿದ್ದು, ತಂತ್ರಜ್ಞಾನ ಆಧಾರಿತ ಮೇಲ್ವಿಚಾರಣೆ, ಉಪಗ್ರಹ ಚಿತ್ರಗಳ ಬಳಕೆ ಹಾಗೂ ಸ್ಥಳೀಯ ಮಟ್ಟದಲ್ಲಿ ಕಟ್ಟುನಿಟ್ಟಿನ ಪರಿಶೀಲನಾ ವ್ಯವಸ್ಥೆಗಳನ್ನು ಜಾರಿಗೊಳಿಸುವ ಬಗ್ಗೆ ಪರಿಶೀಲನೆ ನಡೆಸುವಂತೆ ತಿಳಿಸಿದರು.

**ಗಣಿಗಾರಿಕೆ ಕ್ಷೇತ್ರದಲ್ಲಿ ಪಾರದರ್ಶಕತೆಗೆ ಒತ್ತು:** ಗಣಿಗಾರಿಕೆ ಕ್ಷೇತ್ರದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಹಾಗೂ ಕಾನೂನು ಪಾಲನೆಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಭೆಯಲ್ಲಿ ಸ್ಪಷ್ಟಪಡಿಸಿದರು. ಸಾರ್ವಜನಿಕ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸುವ ಜೊತೆಗೆ, ಪರಿಸರ ಸಂರಕ್ಷಣೆ ಹಾಗೂ ರಾಜ್ಯದ ಆದಾಯ ವೃದ್ಧಿ ಎರಡಕ್ಕೂ ಸಮಾನ ಮಹತ್ವ ನೀಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗಣಿ ಹರಾಜು ಪಡೆದವರು ನಿಗದಿತ ಅವಧಿಯೊಳಗೆ ಕಾರ್ಯಾರಂಭ ಮಾಡದಿದ್ದರೆ ಯಾವ ರೀತಿಯ ದಂಡಾತ್ಮಕ ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟ ನೀತಿ ರೂಪಿಸುವಂತೆ ಸೂಚಿಸಿದ ಅವರು, ರಾಜ್ಯದ ಗಣಿಗಾರಿಕೆ ಕ್ಷೇತ್ರವನ್ನು ಇನ್ನಷ್ಟು ಪಾರದರ್ಶಕ, ಜವಾಬ್ದಾರಿಯುತ ಮತ್ತು ಪರಿಣಾಮಕಾರಿಯಾಗಿ ರೂಪಿಸುವತ್ತ ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿಗಳು, ಸಂಬಂಧಿತ ಇಲಾಖೆಗಳ ಪ್ರತಿನಿಧಿಗಳು ಹಾಗೂ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.

# ಮುಂಬೈ ತೊರೆದು ಬೆಂಗಳೂರಿಗೆ ಹಾರ್ದಿಕ್ ಪಾಂಡ್ಯ ಶಿಫ್ಟ್

**ಬೆಂಗಳೂರು:** ಟೀಮ್ ಇಂಡಿಯಾದ ಆಲ್-ರೌಂಡರ್ ಹಾರ್ದಿಕ್ ಪಾಂಡ್ಯ ತಮ್ಮ ತರಬೇತಿ ಕೇಂದ್ರವನ್ನು ಮುಂಬೈನಿಂದ ಬೆಂಗಳೂರಿಗೆ ಅಧಿಕೃತವಾಗಿ ಸ್ಥಳಾಂತರಿಸಿದ್ದಾರೆ.

ಗಾಯದ ಸಮಸ್ಯೆಯಿಂದ ಚೇತ-ರಿಸಿಕೊಳ್ಳುತ್ತಿರುವ ಅವರು ಬೆಂಗಳೂರಿನಲ್ಲಿರುವ ಬಿಸಿಸಿಐನ ನೂತನ ಸೆಂಟರ್ ಆಫ್ ಎಕ್ಸಲೆನ್ಸ್ ಅನ್ನು ತಮ್ಮ ಉಳಿದ ಕ್ರಿಕೆಟ್ ವೃತ್ತಿಜೀವನದ ಖಾಯಂ ತರಬೇತಿ ನೆಲೆಯನ್ನಾಗಿ ಮಾಡಿಕೊಳ್ಳಲು ನಿರ್ಧ-ರಿಸಿದ್ದಾರೆ. ಈ ಮೂಲಕ ಈ ರೀತಿಯ ಸುದೀರ್ಘ ವ್ಯವಸ್ಥೆಯನ್ನು ಅಳವಡಿಸಿಕೊಂಡ ಮೊದಲ ಪ್ರಮುಖ ಸಕ್ರಿಯ ಭಾರತೀಯ ಕ್ರಿಕೆಟಿಗ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಮೂಲತಃ ಗುಜರಾತ್‌ನ ಬರೋಡಾ ದವರಾದ ಹಾರ್ದಿಕ್ ಪಾಂಡ್ಯ, ಕಳೆದ ಒಂದು ದಶಕದಿಂದ ಮುಂಬೈನ ಲೋವರ್ ಪ್ಯಾರಲ್‌ನಲ್ಲಿ ನೆಲೆಸಿದ್ದರು. ಆದರೆ ಮುಂಬೈನ ಟ್ರಾಫಿಕ್ ಹಾಗೂ ಪ್ರತಿದಿನ ತರಬೇತಿಗಾಗಿ ಘನ್ಸೋಲಿಯಲ್ಲಿರುವ ಮುಂಬೈ ಇಂಡಿಯನ್ಸ್ ಹೈ-ಪರ್ಫಾರ್ಮೆನ್ಸ್ ಸೆಂಟ-ರ್‌ಗೆ ಪ್ರಯಾಣಿಸುವುದು ಅವರಿಗೆ ಕಷ್ಟಕರವಾಗಿತ್ತು. ಈ ಕಾರಣಕ್ಕಾಗಿ ಅವರು ಮುಂಬೈ ತೊರೆದು, ಬೆಂಗಳೂರಿನ ಹೊರವಲಯದಲ್ಲಿರುವ ಬಿಸಿಸಿಐನ 'ಸೆಂಟರ್ ಆಫ್ ಎಕ್ಸಲೆನ್ಸ್' ಸಮೀಪವೇ ಆಸ್ತಿಯೊಂದನ್ನು ಬಾಡಿಗೆಗೆ ಪಡೆದು ಶಿಫ್ಟ್ ಆಗಿದ್ದಾರೆ.

ಬಿಸಿಸಿಐನ ಕೇಂದ್ರ ಒಪ್ಪಂದ ದಲ್ಲಿರುವ ಆಟಗಾರರು ಸಾಮಾನ್ಯ ವಾಗಿ ಗಾಯಗೊಂಡಾಗ ಪುನ ಶ್ಚೇತನ ( ಶಿಬಿರಕ್ಕಾಗಿ ಅಥವಾ ಫಿಟ್‌ನೆಸ್ ಪರೀಕ್ಷೆಗಳಿಗಾಗಿ ಮಾತ್ರ ಬೆಂಗಳೂರಿನ ಈ ಕೇಂದ್ರಕ್ಕೆ ಭೇಟಿ ನೀಡುತ್ತಾರೆ. ಆದರೆ ಹಾರ್ದಿಕ್ ಪಾಂಡ್ಯ, ಇನ್ಮುಂದೆ ತಾವು ಅಂತಾರಾಷ್ಟ್ರೀಯ ಪಂದ್ಯಗಳು ಅಥವಾ ಐಪಿಎಲ್ ಆಡದ ಸಮಯದಲ್ಲಿ ವರ್ಷದ ಸಂಪೂರ್ಣ ಅವಧಿ ಇಲ್ಲೇ ತರಬೇತಿ ನಡೆಸಲಿದ್ದಾರೆ.

**ಗಾಯದ ಸಮಸ್ಯೆಯಿಂದ ಚೇತರಿಕೆ:** ಇತ್ತೀಚೆಗೆ ಸ್ನಾಯು ಸೆಳೆತ ಒಳಗಾಗಿದ್ದರಿಂದ ಹಾರ್ದಿಕ್ ಪಾಂಡ್ಯ ಭಾರತ ತಂಡದ ಇಂಗ್ಲೆಂಡ್ ಪ್ರವಾಸದಿಂದ ಹೊರಗುಳಿದಿದ್ದರು. ಸದ್ಯ ಗಾಯದಿಂದ ಚೇತರಿಸಿಕೊಳ್ಳುತ್ತಿರುವ ಅವರು ಮುಂದಿನ 5-6 ವರ್ಷಗಳ ಕಾಲ ಬಿಳಿ ಚೆಂಡಿನ ಕ್ರಿಕೆಟ್‌ನಲ್ಲಿ ಸಕ್ರಿಯವಾಗಿರಲು ಯೋಜಿಸಿದ್ದು, ಅದಕ್ಕಾಗಿ ಬೆಂಗಳೂರಿನ ಅತ್ಯಾಧುನಿಕ ಸೌಲಭ್ಯಗಳನ್ನು ಬಳಸಿಕೊಳ್ಳಲಿದ್ದಾರೆ.

ಇಲ್ಲಿನ ನೆಟ್ಸ್‌ನಲ್ಲಿ ಬ್ಯಾಟಿಂಗ್ ಅಭ್ಯಾಸ ಮಾಡಲು ತಾವೇ ಸ್ವಂತ ಹಣ ನೀಡಿ ನೆಟ್ ಬೌಲರ್‌ಗಳನ್ನು ನೇಮಿಸಿ ಕೊಳ್ಳುತ್ತಿದ್ದಾರೆ ಹಾಗೂ ಬಿಸಿಸಿಐ ಸೌಲಭ್ಯಗಳ ಜೊತೆಗೆ ತಮ್ಮದೇ ಆದ ವೈಯಕ್ತಿಕ ಫಿಸಿಯೋ ಮತ್ತು ಸ್ಟ್ರೆಂತ್ ಕೋಚ್‌ಗಳ ಉಸ್ತುವಾರಿಯಲ್ಲೂ ಕಠಿಣ ತರಬೇತಿ ನಡೆಸುತ್ತಿದ್ದಾರೆ. ಫಿಟ್‌ನೆಸ್ ಪರೀಕ್ಷೆಯಲ್ಲಿ ತೇರ್ಗಡೆಯಾದ ನಂತರ ಜಿಂಬಾಬ್ವೆ ವಿರುದ್ಧದ ಟಿ20 ಸರಣಿಗೆ ಅವರು ಲಭ್ಯರಾಗುವ ಸಾಧ್ಯತೆ ಇದೆ.

ಹಾರ್ದಿಕ್ ಪಾಂಡ್ಯ ಅವರ ಈ ನಿರ್ಧಾರವು ಭಾರತೀಯ ಕ್ರಿಕೆಟ್ ವಲಯದಲ್ಲಿ ಹೊಸ ಮಾದರಿಯಾಗಿ ಪರಿಗಣಿಸಲಾಗುತ್ತಿದೆ. ಬಿಸಿಸಿಐನ ಸೆಂಟರ್ ಆಫ್ ಎಕ್ಸಲೆನ್ಸ್ ವಿಶ್ವಮಟ್ಟದ ತರಬೇತಿ ಸೌಲಭ್ಯಗಳು, ಅತ್ಯಾಧುನಿಕ ಜಿಮ್, ಕ್ರೀಡಾ ವಿಜ್ಞಾನ ಪ್ರಯೋಗಾಲಯ, ಪುನಶ್ಚೇತನ ಕೇಂದ್ರ ಮತ್ತು ಉನ್ನತ ಮಟ್ಟದ ವೈದ್ಯಕೀಯ ವ್ಯವಸ್ಥೆಗಳನ್ನು ಹೊಂದಿದ್ದು, ಆಟಗಾರರ ದೈಹಿಕ ಸಾಮರ್ಥ್ಯ ಮತ್ತು ಪ್ರದರ್ಶನ ಸುಧಾರಣೆಗೆ ನೆರವಾಗುತ್ತಿದೆ. ಹಾರ್ದಿಕ್ ಅವರಂತಹ ಹಿರಿಯ ಆಟಗಾರರು ಈ ಕೇಂದ್ರವನ್ನು ಶಾಶ್ವತ ತರಬೇತಿ ತಾಣವನ್ನಾಗಿ ಆಯ್ಕೆ ಮಾಡಿಕೊಳ್ಳುತ್ತಿರುವುದು, ಭಾರತದ ಕ್ರೀಡಾ ಮೂಲಸೌಕರ್ಯಗಳ ಬೆಳವಣಿಗೆಗೆ ಸಾಕ್ಷಿಯಾಗಿದೆ.

ಮುಂದಿನ ವರ್ಷಗಳಲ್ಲಿ ನಡೆಯಲಿರುವ ಪ್ರಮುಖ ಅಂತಾರಾಷ್ಟ್ರೀಯ ಟೂರ್ನಿಗಳನ್ನು ಗಮನದಲ್ಲಿಟ್ಟುಕೊಂಡು ಹಾರ್ದಿಕ್ ಪಾಂಡ್ಯ ತಮ್ಮ ಫಿಟ್‌ನೆಸ್ ಮತ್ತು ಪ್ರದರ್ಶನಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ ಎನ್ನಲಾಗಿದೆ. ವಿಶೇಷವಾಗಿ ಬಿಳಿ ಚೆಂಡಿನ ಕ್ರಿಕೆಟ್‌ನಲ್ಲಿ ಭಾರತ ತಂಡದ ಪ್ರಮುಖ ಆಲ್‌ರೌಂಡರ್ ಆಗಿ ಮುಂದುವರಿಯುವ ಗುರಿ ಹೊಂದಿರುವ ಅವರು, ಗಾಯಗಳಿಂದ ದೂರವಿದ್ದು ದೀರ್ಘಕಾಲ ತಂಡಕ್ಕೆ ಸೇವೆ ಸಲ್ಲಿಸುವ ಉದ್ದೇಶದಿಂದ ಬೆಂಗಳೂರಿನಲ್ಲೇ ಕಠಿಣ ತರಬೇತಿ ಮತ್ತು ಪುನಶ್ಚೇತನ ಕಾರ್ಯಕ್ರಮಗಳನ್ನು ಅನುಸರಿಸಲು ನಿರ್ಧರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

